ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಷ್ಟ್ರಪತಿ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ    ದಿನಾಂಕ : DATE : 10/08/2019

# ಅಕ್ಟೋಬರ್ 31 ರಿಂದ ಹೊಸ ಕೇಂದ್ರಾಡಳಿತ ಪ್ರದೇಶಗಳು

ನವದೆಹಲಿ: ಜಮ್ಮು-ಕಾಶ್ಮೀರವನ್ನು ವಿಭಜಿಸಿ ಜಮ್ಮು-ಕಾಶ್ಮೀರ ಮತ್ತು ಲಡಾಖ್ ಕೇಂದ್ರಾಡಳಿತ ಪ್ರದೇಶವಾಗಿ ರಚಿಸುವ ಮಸೂದೆಗೆ ರಾಷ್ಟ್ರಪತಿ ರಾಮನಾಥ ಕೋವಿಂದ ಶುಕ್ರವಾರ ಸಹಿ ಹಾಕಿದ್ದಾರೆ. ಈ ಮಸೂದೆ ಕೆಲ ದಿನಗಳ ಹಿಂದೆ ಸಂಸತ್‌ನ ಎರಡೂ ಸದನಗಳಲ್ಲಿ ಅಂಗೀಕಾರವಾಗಿತ್ತು. ಈ ಪ್ರಕಾರ ಜಮ್ಮು-ಕಾಶ್ಮೀರವನ್ನು ವಿಭಜಿಸಿ ಎರಡು ಕೇಂದ್ರಾಡಳಿತ ಪ್ರದೇಶಗಳಾಗಿ ಘೋಷಿಸಲಾಗಿದೆ. ಅಕ್ಟೋಬರ್ 31ರಿಂದ ಶಾಸಕಾಂಗವಿಲ್ಲದ ಕೇಂದ್ರಾಡಳಿತ ಪ್ರದೇಶವಾಗಿ ಲಡಾಖ್ ಹಾಗೂ ಶಾಸಕಾಂಗ ಹೊಂದಿದ ಕೇಂದ್ರಾಡಳಿತ ಪ್ರದೇಶವಾಗಿ ಜಮ್ಮು ಮತ್ತು ಕಾಶ್ಮೀರ ಅಸ್ತಿತ್ವಕ್ಕೆ ಬರಲಿವೆ ಎಂದು ಗೃಹ ಸಚಿವಾಲಯ ಮಾಹಿತಿ ನೀಡಿದೆ. ಕಾಶ್ಮೀರಕ್ಕೆ ಸಂವಿಧಾನದ 370ನೇ ವಿಧಿ ಅನ್ವಯ ನೀಡಲಾಗಿದ್ದ ವಿಶೇಷ ಸ್ಥಾನಮಾನವನ್ನು ರಾಷ್ಟ್ರಪತಿಗಳು ಈಗಾಗಲೇ ರದ್ದುಪಡಿಸಿದ್ದಾರೆ.

» **ಮಸೂದೆಗೆ ರಾಷ್ಟ್ರಪತಿ ಸಮ್ಮತಿ**



**ಯುಎಪಿಎಗೆ ರಾಷ್ಟ್ರಪತಿ ಅಂಕಿತ:** ಭಯೋತ್ಪಾದಕ ಸಂಘಟನೆಗಳ ನಾಯಕರನ್ನು ಉಗ್ರರೆಂದು ಘೋಷಿಸಲು ನೆರವಾಗುವ ಕಾನೂನುಬಾಹಿರ ಚಟುವಟಿಕೆ ತಡೆಗಟ್ಟುವಿಕೆ (ಯುಎಪಿಎ) ತಿದ್ದುಪಡಿ ಕಾಯ್ದೆ, 2019ಗೆ ರಾಷ್ಟ್ರಪತಿ ರಾಮನಾಥ ಕೋವಿಂದ ಅಂಕಿತ ಹಾಕಿದ್ದಾರೆ. ಕಳೆದ ಜು. 24ರಂದು ಲೋಕಸಭೆಯಲ್ಲಿ ಹಾಗೂ ಆ. 2ರಂದು ರಾಜ್ಯಸಭೆಯಲ್ಲಿ ಯುಎಪಿಎ ಮಸೂದೆ ಅಂಗೀಕರಿಸಲ್ಪಟ್ಟಿದೆ. ಈ ಮಸೂದೆ ಕಾನೂನು ರೂಪ ಪಡೆದ ಬಳಿಕ ಭಾರತದಿಂದ ಮೊದಲಿಗೆ ಲಷ್ಕರ್ ಸಂಘಟನೆ ಸಂಸ್ಥಾಪಕ ಹಫೀಜ್ ಸಯೀದ್ ಹಾಗೂ ಜೈಷ್‌ನ ಮಸೂದ್ ಅಜರ್‌ರನ್ನು ಉಗ್ರರೆಂದು ಘೋಷಿಸಿಸುವ ಸಾಧ್ಯತೆ ಇದೆ. ಉಗ್ರರೆಂದು ಘೋಷಿಸಲ್ಪಡುವವರ ಸಂಚಾರಕ್ಕೆ ನಿರ್ಬಂಧ ವಿಧಿಸುವುದರ ಜತೆಗೆ ಅವರ ಎಲ್ಲ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಅಧಿಕಾರ ಇರುತ್ತದೆ.